# ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ

## ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಪೋಕ್ಸೋ ಕಾಯ್ದೆ ಜಾಗೃತಿ-ತರಬೇತಿ ಕಾರ್ಯಕ್ರಮ

**12-05-2026**




ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸಮಾಜ ಕಾರ್ಯ ವಿಭಾಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಪ್ರಕೃತಿ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಮಕ್ಕಳ ಹಕ್ಕುಗಳು ಮತ್ತು ಕಾನೂನುಗಳ ರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರದ ಕುರಿತು ವಿಶೇಷ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕರಾದ ಡಾ.ಸಿ.ವಿ. ಸ್ನೇಹಾರವರು ಪೋಕ್ಸೋ ಕಾಯ್ದೆಯ ಮಹತ್ವದ ಕುರಿತು ವಿವರಿಸಿದರು. ಅತ್ಯಂತ ಪರಿಣಾಮಕಾರಿಯಾದ ಈ ಕಾನೂನಿನ ಕುರಿತು ಸಮಾಜದಲ್ಲಿ ಎಚ್ಚರಿಕೆಯ ಸಂದೇಶ ಬಿತ್ತರಿಸಬೇಕೆಂದು ಅವರು ಸೂಚಿಸಿದರು.

ಬಾಲ್ಯ ವಿವಾಹ,  ಬಾಲ ಕಾರ್ಮಿಕ ಮತ್ತು ಬಾಲಗರ್ಭಿಣಿಯರ ಸಮಸ್ಯೆ, ಭ್ರೂಣ ಹತ್ಯೆ, ಭಿಕ್ಷಾಟನೆ ಮತ್ತು ವೇಶ್ಯಾವಾಟಿಕೆಗೆ ಮಕ್ಕಳ ದುರ್ಬಳಕೆ ಇತ್ಯಾದಿ ಸಾಮಾಜಿಕ ಪಿಡುಗುಗಳ ಬಗ್ಗೆ ಜನಜಾಗೃತಿ ಮೂಡಿಸುವ ಪ್ರಯತ್ನದಲ್ಲಿ

ಕೈಜೋಡಿಸುವಂತೆ ಅವರು ವಿದ್ಯಾರ್ಥಿಗಳಿಗೆ ಮನವಿ ಮಾಡಿದರು.

ಕುಟುಂಬವೂ ಸೇರಿದಂತೆ ಸಮಾಜದ ವಿವಿಧ ಹಂತಗಳಲ್ಲಿ ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯ ಹಾಗೂ ಹೆಣ್ಣು ಮಕ್ಕಳ ಲೈಂಗಿಕ ಶೋಷಣೆಯನ್ನು ತಡೆಗಟ್ಟಲು ಯುವ ಸಮೂಹ ಸಕ್ರಿಯವಾಗಿ ನೆರವಾಗಬೇಕೆಂದು ಅವರು ಉತ್ತೇಜಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕುಲಪತಿಗಳಾದ ಪ್ರೊ. ರಮೇಶ್.ಬಿ. ಮಾತನಾಡಿ ಕರ್ನಾಟಕದಲ್ಲಿ ಕಳೆದೊಂದು ವರ್ಷದಲ್ಲಿ ಸುಮಾರು 80 ಸಾವಿರ ಬಾಲಗರ್ಭಿಣಿ  ಪ್ರಕರಣಗಳು ಪತ್ತೆಯಾಗಿರುವುದು ಆತಂಕದ ವಿಷಯವೆಂದು ಬಣ್ಣಿಸಿದರು.

ಹದಿಹರೆಯದ ಹೆಣ್ಣುಮಕ್ಕಳನ್ನು ಸಾಮಾಜಿಕ ಮಾಧ್ಯಮಗಳ ಮೂಲಕ ಆಕರ್ಷಿಸಿ ದುರ್ಬಳಕೆ ಮಾಡಿಕೊಳ್ಳುವ ವಂಚಕರ ಜಾಲದ ಬಗ್ಗೆ  ಸದಾ ಜಾಗೃತವಾಗಿರುವಂತೆ ಅವರು ಇದೇ ವೇಳೆ ವಿದ್ಯಾರ್ಥಿಗಳನ್ನು ಎಚ್ಚರಿಸಿದರು.

ಮಕ್ಕಳ ಮೇಲಿನ ದೌರ್ಜನ್ಯದ ಪ್ರಕರಣಗಳನ್ನು ಸಹಾಯವಾಣಿ ಮೂಲಕ ಸಂಬಂಧಪಟ್ಟ ಇಲಾಖೆ ಮತ್ತು ಪೊಲೀಸರ ಗಮನಕ್ಕೆ ತರುವ ಮೂಲಕ ಜವಾಬ್ದಾರಿಯುತ ನಾಗರಿಕರಾಗಿ ವರ್ತಿಸಲು ವಿದ್ಯಾರ್ಥಿಗಳನ್ನು ಅವರು ಪ್ರೇರೇಪಿಸಿದರು.

ಬೆಂಗಳೂರು ನಗರ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಲೀಲಾ ಕಲ್ಲಮ್ಮನವರ್ ಪ್ರಾಸ್ತಾವಿಕ ಭಾಷಣ ಮಾಡಿದರು. ಮಕ್ಕಳ ಕಲ್ಯಾಣ ಸಮಿತಿಯ ನಿಕಟಪೂರ್ವ ಅಧ್ಯಕ್ಷರಾದ ಮೀನಾ ಜೈನ್ ಮತ್ತು ಎನ್ ಫೋಲ್ಡ್ ಸಂಸ್ಥೆಯ ನಿರ್ದೇಶಕರಾದ ಋಷಿ ಕುಶಾಲಪ್ಪ ವಿಶೇಷ ಉಪನ್ಯಾಸ ನೀಡಿದರು.

ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥರಾದ ಪ್ರೊ.ರಿತಿಕಾ ಸಿನ್ಹಾ ಉಪಸ್ಥಿತರಿದ್ದರು. ಉಪನ್ಯಾಸಕರಾದ ವಾಣಿಶ್ರೀ ಎಂ. ಕಾರ್ಯಕ್ರಮ ನಿರೂಪಿಸಿದರು. ಡಾ. ವೆಂಕಟೇಶಮೂರ್ತಿ ಸ್ವಾಗತಿಸಿದರು. ಎಂ.ವೀರಪ್ಪ ವಂದಿಸಿದರು. ಮಹೇಂದ್ರ ಎಂ. ಪ್ರತಿಜ್ಞಾವಿಧಿ ಬೋಧಿಸಿದರು.









ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು
ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ಹಾಗೂ ಸಂಶೋಧನ ವಿಭಾಗ
ಡಾ. ಸ್ನೇಹಾ ಸಿ.ವಿ
ಶ್ರೀ ರಮೇಶ್ ಬಿ.